# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 499 (582)
2. ಸದಸ್ಯರ ಹೆಸರು : ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 20.02.2023
4. ಉತ್ತರಿಸಬೇಕಾದ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಮಂಡ್ಯ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ಯಾನ್ಸರ್ ಆಸ್ಪತ್ರೆ ಕಟ್ಟಡ ಕಾಮಗಾರಿ ಹಾಗೂ ಆಸ್ಪತ್ರೆಗೆ ಉಪಯುಕ್ತವಾಗುವ ಯಂತ್ರೋಪಕರಣಗಳ ಅನುಸ್ಥಾಪನ ಕಾರ್ಯವು ಪೂರ್ಣಗೊಂಡಿದೆಯೇ; ಪೂರ್ಣಗೊಂಡಿದ್ದಲ್ಲಿ, ಸಾರ್ವಜನಿಕರ ಚಿಕಿತ್ಸಾ ಸೇವೆಗಳನ್ನು ಸದರಿ ಕಟ್ಟಡದಲ್ಲಿ ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ, ಬಾಕಿ ಇರುವ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು; ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು) | ಕೇಂದ್ರ ಸರ್ಕಾರದ ಸಹಯೋಗದೊಂದಿಗೆ National Programme for Prevention and Control of Cancer, Diabetes, Cardiovascular Diseases and Stroke (NPCDCS) ಯೋಜನೆಯಡಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಹಳೆಯದಾದ ಫೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು ರೂ.4500.00 ಲಕ್ಷಗಳ ಅನಾವರ್ತಕ ವೆಚ್ಚ ಹಾಗೂ ರೂ.1118.00 ಲಕ್ಷಗಳ ಆವರ್ತಕ ವೆಚ್ಚಗಳನ್ನೊಳಗೊಂಡಂತೆ ಒಟ್ಟಾರೆ ಅಂದಾಜು ವೆಚ್ಚ ರೂ.5618.00 ಲಕ್ಷಗಳ ಮೊತ್ತದಲ್ಲಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗೆ ಮಂಜೂರಾತಿ ನೀಡಿ ಸರ್ಕಾರಿ ಆದೇಶ ಸಂಖ್ಯೆ: ಆಕುಕ 228 ಎಂಪಿಎಸ್ 2016, ದಿ:21.03.2017 ರಲ್ಲಿ ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಈ ಕಾಮಗಾರಿಗೆ ಇದುವರೆವಿಗೆ ಕೇಂದ್ರ ಮತ್ತು ರಾಜ್ಯದ ಪಾಲು ಸೇರಿ ಒಟ್ಟಾರೆ ರೂ.30.02 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br><br>ಈ ಕಾಮಗಾರಿಯ ಅನಾವರ್ತಕ ವೆಚ್ಚ (Non-recurring) ರೂ.4500.00 ಲಕ್ಷಗಳಲ್ಲಿ, ಸಿವಿಲ್ ಕಾಮಗಾರಿಗಾಗಿ ರೂ.1200.00 ಲಕ್ಷಗಳು ಹಾಗೂ ಉಪಕರಣಗಳಿಗಾಗಿ ರೂ.3300.00 ಲಕ್ಷಗಳನ್ನು ನಿಗದಿಪಡಿಸಲಾಗಿರುತ್ತದೆ. ಸಿವಿಲ್ ಕಾಮಗಾರಿಗಳಿಗಾಗಿ ನಿಗದಿಪಡಿಸಲಾದ ಅನುದಾನವನ್ನು ಬಿಡುಗಡೆಗೊಳಿಸಲಾಗಿದ್ದು, ಸಂಪೂರ್ಣವಾಗಿ ಬಳಸಿಕೊಳ್ಳಲಾಗಿರುತ್ತದೆ ಹಾಗೂ ಸದರಿ ಕಟ್ಟಡದ ಸಿವಿಲ್ ಕಾಮಗಾರಿಯು ಶೇ.90 ರಷ್ಟು ಭಾಗ ಪೂರ್ಣಗೊಂಡಿರುತ್ತದೆ.<br><br>ಮುಂದುವರೆದು, ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಟರ್ಷಿಯರಿ ಕ್ಯಾನ್ಸರ್ ಕೇರ್ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಸಿವಿಲ್ ಕಾಮಗಾರಿಯ ಮೂಲ ಅಂದಾಜು ಮೊತ್ತವು ರೂ.1175.00 ಲಕ್ಷಗಳಿಂದ ರೂ.1740.00 ಲಕ್ಷಗಳಿಗೆ ಪರಿಷ್ಕೃತಗೊಂಡಿದ್ದು, ಈ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ನಿರ್ದೇಶಕರು, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರಿಂದ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಸದರಿ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| (ಆ) | ಕಟ್ಟಡ ಕಾಮಗಾರಿ ಮತ್ತು ಯಂತ್ರೋಪಕರಣಗಳ ಖರೀದಿ ಮಾಡಲು ಸುಮಾರು 05 ಕೋಟಿ ಅನುದಾನ ಅವಶ್ಯಕತೆಯಿದ್ದು ಸದರಿ ಅನುದಾನ ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | |
| (ಇ) | ಕ್ಯಾನ್ಸರ್ ಆಸ್ಪತ್ರೆಯು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಲು ಯಂತ್ರೋಪಕರಣಗಳ ಕೊರತೆ ಇದೆಯೇ; ಕೊರತೆ ಇದ್ದಲ್ಲಿ, ಬೇಕಾಗಿರುವ ಯಂತ್ರೋಪಕರಣಗಳು ಯಾವುವು; ಹಾಗೂ ಅವುಗಳನ್ನು ಆಸ್ಪತ್ರೆಗೆ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | |



Generated from eOffice by DR K SUDHAKAR, MED-MIN(SK), MINISTER, MEDICAL EDUCATION SEC on 17/02/2023 07:06 PM

<table>
<tr><td></td><td></td><td>ಯಂತ್ರೋಪಕರಣಗಳನ್ನು ಖರೀದಿಸುವ ಸಂಬಂಧ ಈಗಾಗಲೇ 3 ಬಾರಿ ಟೆಂಡರ್‌ಗಳನ್ನು ಕರೆಯಲಾಗಿದ್ದು, ಮೊದಲನೇ ಬಾರಿಗೆ ಕರೆಯಲಾದ ಟೆಂಡರ್‌ನಲ್ಲಿ ಯಾವೊಂದು ಸಂಸ್ಥೆಗಳು ಸಹ ಭಾಗವಹಿಸಿರುವುದಿಲ್ಲ. ಎರಡನೇ ಬಾರಿಗೆ ಕರೆಯಲಾದ ಟೆಂಡರ್ ಸಿಂಗಲ್ ಬಿಡ್ ಟೆಂಡರ್ ಆಗಿರುತ್ತದೆ. ಮೂರನೇ ಬಾರಿಗೆ ಕರೆಯಲಾದ ಟೆಂಡರ್ ಪ್ರಕ್ರಿಯೆಯಲ್ಲಿ ಕೇಂದ್ರ ಸರ್ಕಾರವು ಉಪಕರಣಕ್ಕೆ ನಿಗದಿಪಡಿಸಲಾಗಿರುವ Ceiling Price ಗಿಂತ ಅಧಿಕವಾಗಿ ದರ ಸ್ವೀಕೃತವಾದುದರಿಂದ ನಿಯಮಾನುಸಾರ ಬಿಡ್‌ನ್ನು ತಿರಸ್ಕರಿಸಲಾಗಿರುತ್ತದೆ. ಮತ್ತೊಮ್ಮೆ ಇ-ಟೆಂಡರ್ ಕರೆಯುವ ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ.<br><br>ಆದಾಗ್ಯೂ, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಹಾಲಿ ಶಸ್ತ್ರಚಿಕಿತ್ಸೆ ಅಗತ್ಯವಿರುವ ಕ್ಯಾನ್ಸರ್ ರೋಗಿಗಳಿಗೆ ಶಸ್ತ್ರಚಿಕಿತ್ಸೆ ಕಿಮೋಥೆರಪಿ ಹಾಗೂ ಪ್ಯಾಲಿಟಿವ್ ಸೌಲಭ್ಯವನ್ನು ನೀಡಲಾಗುತ್ತಿದೆ. ಇದಲ್ಲದೇ Cancer Registry ಕಾರ್ಯಕ್ರಮವೂ ಸಹ ಕಾರ್ಯಗತವಾಗಿರುತ್ತದೆ.</td></tr>
<tr><td>(ಈ)</td><td>ಸರ್ಕಾರದಿಂದ ಮಂಜೂರಾಗಿರುವ ವೈದ್ಯರು ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು;</td><td rowspan="2">ಮಂಡ್ಯ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಕ್ಯಾನ್ಸರ್ ಕೇಂದ್ರವನ್ನು 2007 ರಲ್ಲಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವರ್ಗಾಯಿಸಿದ್ದು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳನ್ನು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವಿಲೀನಗೊಳಿಸಲಾಗಿದ್ದು, ಗ್ರೂಪ್ 'ಎ' ವೃಂದದಲ್ಲಿ-01, ಗ್ರೂಪ್ 'ಬಿ' ವೃಂದದಲ್ಲಿ-04, ಗ್ರೂಪ್ 'ಸಿ' ವೃಂದದಲ್ಲಿ-22 ಮತ್ತು ಗ್ರೂಪ್ 'ಡಿ' ವೃಂದದಲ್ಲಿ-33 ಹುದ್ದೆಗಳು ಸೇರಿದಂತೆ ಒಟ್ಟು 60 ಹುದ್ದೆಗಳು ಮಂಜೂರಾಗಿರುತ್ತವೆ. ಅದರಲ್ಲಿ ಗ್ರೂಪ್ 'ಬಿ' ವೃಂದದಲ್ಲಿ-01, ಗ್ರೂಪ್ 'ಸಿ' ವೃಂದದಲ್ಲಿ-15 ಮತ್ತು ಗ್ರೂಪ್ 'ಡಿ' ವೃಂದದಲ್ಲಿ-15 ಹುದ್ದೆಗಳಲ್ಲಿ ಅಧಿಕಾರಿ / ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನದಲ್ಲಿನ ಪೆರಿಫೆರಲ್ ಕ್ಯಾನ್ಸರ್ ಕೇರ್ ಕೇಂದ್ರಕ್ಕೆ ಬರುವ ರೋಗಿಗಳ ಚಿಕಿತ್ಸೆಯ ದೃಷ್ಟಿಯಿಂದ ಶ್ರೀಮತಿ ಮಹಿತಾ ಕೆ.ಸಿ. ರೇಡಿಯೇಷನ್ ಸೇಫ್ಟಿ ಆಫೀಸರ್, ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಇವರನ್ನು ನಿಯೋಜನೆ ಮೇಲೆ ಮಂಡ್ಯ ಕ್ಯಾನ್ಸರ್ ಸಂಸ್ಥೆಗೆ ನೇಮಿಸಲಾಗಿದೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸರ್ಜಿಕಲ್ ಆಂಕಾಲಜಿಸ್ಟ್ ರವರು ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br><br>ವೈದ್ಯಾಧಿಕಾರಿಗಳು ಮತ್ತು ಇತರೆ ಹುದ್ದೆಗಳ ನೇಮಕಾತಿ ಬಗ್ಗೆ ಸಂಸ್ಥೆಯ ಆಡಳಿತ ಪರಿಷತ್ ಸಭೆಯಲ್ಲಿ ನಿರ್ಣಯಿಸಿದಂತೆ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯವರಿಗೆ Tertiary care cancer ಕೇಂದ್ರಕ್ಕೆ ಅಗತ್ಯವಾದ ವೈದ್ಯರು ಮತ್ತು ಇತರೆ ಸಿಬ್ಬಂದಿಗಳ ವಿವರವನ್ನು ನೀಡಲು ಕೋರಲಾಗಿದ್ದು, ಸದರಿಯವರು ನೀಡುವ ವರದಿಯಂತೆ ವೈದ್ಯರು ಮತ್ತು ಇತರೆ ಸಿಬ್ಬಂದಿಗಳ ನೇಮಕಾತಿಗೆ ಕ್ರಮವಹಿಸಲಾಗುತ್ತಿದೆ.</td></tr>
<tr><td>(ಉ)</td><td>ಖಾಲಿ ಇರುವ ವೈದ್ಯರು ಹಾಗೂ ಸಿಬ್ಬಂದಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?</td></tr>
</table>

ಸಂಖ್ಯೆ: ಎಂಇಡಿ 105 ಎಂಪಿಎಸ್ 2023

(ಡಾ.ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು



Generated from eOffice by DR K SUDHAKAR, MED-MIN(SK) MINISTER MEDICAL EDUCATION SEC on 17/02/2023 07:08 PM